ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 05 ನೇ ಫೆಬ್ರುವರಿ, 2021

ಮಂಡ್ಯ ಜಿಲ್ಲಾ ಪಂಚಾಯಿತಿ ಸಾಮಾನ್ಯ ಸಭೆ ನಡೆಯದಿರುವ ಬಗ್ಗೆ

ಶ್ರೀ  ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ) -

431 (515) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಮಂಡ್ಯ ಜಿಲ್ಲಾ ಪಂಚಾಯಿತಿಯ ಸಾಮಾನ್ಯ ಸಭೆಯು ಕೋರಂ ಅಭಾವದಿಂದ ಸೆಪ್ಟೆಂಬರ್-2019 ರಿಂದ ನಡೆಯದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇದುವರೆವಿಗೂ ಸಾಮಾನ್ಯ ಸಭೆ ನಡೆಯದೆ ಜಿಲ್ಲೆಯ ಅಭಿವೃದ್ಧಿ ಕಾರ್ಯಕ್ರಮಗಳು ಸಂಪೂರ್ಣವಾಗಿ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಾದರೆ, ಜಿಲ್ಲಾ ಪಂಚಾಯಿತಿಯ ಸಮಗ್ರ ಅಭಿವೃದ್ಧಿಗಾಗಿ ಯಾವ ಬದಲಿ ವ್ಯವಸ್ಥೆಯನ್ನು ಮಾಡಲಾಗಿದೆ;

(ಈ) ಮಂಡ್ಯ ಜಿಲ್ಲಾ ಪಂಚಾಯಿತಿಯ ಈ ರೀತಿಯ ಆಡಳಿತ ಕಾರ್ಯವ್ಯವಸ್ಥೆ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ?